| | | | |
|---|---|---|---|
| | | ದಲ್ಲಿ ಆಯಾಯಾ ನಿಲಯದಲ್ಲಿ ವೆಚ್ಚ ಭರಿಸಿ ಮೂಲಭೂತ ಸೌಕರ್ಯಗಳಾದ ಸೋಲಾರ್ ವಾಟರ್ ಹೀಟರ್‌ಗಳನ್ನು ಖರೀದಿ ನಿಯಮಗಳ ಅನುಸಾರ ಖರೀದಿಸಿ ಒದಗಿಸಲು ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯ ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿರವರು ಕೋರಿರುವುದಾಗಿ ತಿಳಿಸುತ್ತಾ, ಉಳಿತಾಯವಾಗಲಿರುವ ರು.12.00ಲಕ್ಷಗಳಲ್ಲಿ ಹಾಸನ, ಅರಸೀಕೆರೆ ತಾಲ್ಲೂಕು ವ್ಯಾಪ್ತಿಯಲ್ಲಿ ಆಯಾ ನಿಲಯಗಳಲ್ಲಿ ಖರ್ಚು ಭರಿಸಿ ಡಿ.ಜಿ.ಎಸ್.ಡಿ ದರಗಳಲ್ಲಿ ಸೋಲಾರ್ ವಾಟರ್ ಹೀಟರ್ ಖರೀದಿಗೆ ಪ್ರಸ್ತಾಪಿಸಿರುತ್ತಾರೆ. 2011-12ರ ಆರ್ಥಿಕ ವರ್ಷಾಂತ್ಯವಾಗಿದ್ದು, ಮಾರ್ಚ್ 15ರೊಳಗೆ ಖಜಾನೆಗೆ ಬಿಲ್ಲುಗಳನ್ನು ಸಲ್ಲಿಸಬೇಕಾಗಿದ್ದರಿಂದ, ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಪ್ರಾಶಸ್ತ್ಯ ನೀಡಿ ಸೋಲಾರ್ ವಾಟರ್ ಹೀಟರ್‌ಗಳನ್ನು ಹಾಸನ ನಗರದ ಮತ್ತು ಅರಸೀಕೆರೆ ತಾಲ್ಲೂಕು ವಿದ್ಯಾರ್ಥಿನಿಲಯಗಳಿಗೆ ಅಳವಡಿಸಲು ಕ್ರಮ ವಹಿಸಿದ್ದು, ಇದಕ್ಕೆ ಘಟನೋತ್ತರ ಮಂಜೂರಾತಿ ನೀಡಬೇಕೆಂದು ಕೋರಿದರು. | ಹನ್ನೆರಡು ಲಕ್ಷಗಳು ಮಾತ್ರ) ಗಳಲ್ಲಿ ಹಾಸನ ನಗರದ ಮತ್ತು ಅರಸೀಕೆರೆ ತಾಲ್ಲೂಕುವಿದ್ಯಾರ್ಥಿ ನಿಲಯಗಳಿಗೆ ಸೋಲಾರ್ ವಾಟರ್ ಹೀಟರ್‌ಗಳನ್ನು ಅಳವಡಿಸಿರುವುದಕ್ಕೆ ಸಭೆಯಲ್ಲಿ ಘಟನೋತ್ತರ ಮಂಜೂರಾತಿ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸ ಲಾಯಿತು. |
| | | ಮತ್ಯಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | |

(ಎಂ.ಕೆ.ದೇವಪ್ಪ ಮಲ್ಲಿಗೆವಾಳು)
ಅಧ್ಯಕ್ಷರು
ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
ಜಿಲ್ಲಾ ಪಂಚಾಯಿತಿ, ಹಾಸನ

| | | | |
|---|---|---|---|
| | | ಮುಂದುವರೆದು, ಬಾಗೆ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಬೇರೆ ಕಟ್ಟಡಕ್ಕೆ ವರ್ಗಾವಣೆ ಮಾಡಲು ಕ್ರಮ ವಹಿಸಬೇಕೆಂದು ತಿಳಿಸಿದರು.<br><br>**<u>ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ:</u>**<br>ಉಪ ನಿರ್ದೇಶಕರ ಕಚೇರಿಯ ಪ್ರತಿನಿಧಿಯವರು ಇಲಾಖೆಯ ಯೋಜನೆಗಳಡಿಯಲ್ಲಿ ಸಾಧಿಸಿರುವ ಪ್ರಗತಿ ವಿವರಗಳನ್ನು ಸಭೆಗೆ ಒದಗಿಸಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಎಸ್.ಎಲ್.ನಾಗಮಣಿರವರು ಮಾತನಾಡುತ್ತಾ, ಹೊಳಲಗೋಡು ಗ್ರಾಮ ಪಂಚಾಯಿತಿ ಲಕ್ಷ್ಮೀಪುರ ಗ್ರಾಮದಲ್ಲಿ 18–20 ಮಕ್ಕಳು ಇದ್ದು, ಅಂಗನವಾಡಿ ಕೇಂದ್ರ ಇರುವುದಿಲ್ಲ. ಆದ್ದರಿಂದ, ಹೊಸದಾಗಿ ಅಂಗನವಾಡಿ ಕೇಂದ್ರವನ್ನು ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀಎ.ಬಿ.ನಂಜುಂಡೇಗೌಡರವರು ಮಾತನಾಡುತ್ತಾ, ಚನ್ನರಾಯ ಪಟ್ಟಣ ತಾ: ದಮ್ಮನಿಂಗಲ ಗ್ರಾಮ ಪಂಚಾಯಿತಿ, ಅರುವನಹಳ್ಳಿ ಗ್ರಾಮಕ್ಕೆ ಹೊಸದಾಗಿ ಅಂಗನವಾಡಿ ಕೇಂದ್ರವನ್ನು ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಬೇಕೆಂದು ಕೋರಿದರು.<br>ಉಪ ಕಾರ್ಯದರ್ಶಿ (ಆಡಳಿತ)ರವರು ಮಾತನಾಡುತ್ತಾ, ಅಂಗನವಾಡಿ ಕೇಂದ್ರ ಗಳಿಗೆ ಐ.ಎಂ.ಐ.ಎಸ್ ಯೋಜನೆಯಡಿ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲು ಅವಕಾಶ ಮಾಡಲಾಗಿದೆ. ಈ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರನ್ನು ಸಂಪರ್ಕಿಸಿ ಕುಡಿಯುವ ನೀರಿನ ಸೌಲಭ್ಯವನ್ನು ಕಲ್ಪಿಸುವ ಬಗ್ಗೆ ಕ್ರಮ ವಹಿಸುವಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಯವರಿಗೆ ತಿಳಿಸಬೇಕೆಂದು ಸೂಚಿಸಿದರು. | ಮಾನ್ಯ ಸದಸ್ಯರಾದ ಶ್ರೀಮತಿ ಎಸ್.ಎಲ್.ನಾಗಮಣಿ ಮತ್ತು ಶ್ರೀ ಎ.ಬಿ ನಂಜುಂಡೇಗೌಡರವರು ಕೋರಿರುವಂತೆ ಹೊಳಲಗೋಡು ಗ್ರಾಮ ಪಂಚಾಯಿತಿ ಲಕ್ಷ್ಮೀಪುರ ಮತ್ತು ದಮ್ಮನಿಂಗಲ ಗ್ರಾಮ ಪಂಚಾಯಿತಿ ಅರುವನಹಳ್ಳಿ ಗ್ರಾಮಗಳಿಗೆ ಹೊಸದಾಗಿ ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸ ಲಾಯಿತು. |
| 2 | ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವ್ಯಾಪ್ತಿ ಯಲ್ಲಿ ಕಾರ್ಯ ನಿರ್ವಹಿಸು ತ್ತಿರುವ ವಿದ್ಯಾರ್ಥಿನಿಲಯ ಗಳಿಗೆ ಮೂಲಭೂತ ಸೌಕರ್ಯ ಒದಗಿಸುವ ಕುರಿತು. | ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾಸನ ಇವರು ಮಾತನಾಡುತ್ತಾ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿ ಜಿಲ್ಲೆಯಲ್ಲಿ 93 ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯ ನಿರ್ವಹಿಸುತ್ತಿವೆ. ಈ ವಿದ್ಯಾರ್ಥಿನಿಲಯಗಳಲ್ಲಿ 6245 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ವಿದ್ದು, 2011–12ನೇ ಸಾಲಿನಲ್ಲಿ 5564 ವಿದ್ಯಾರ್ಥಿಗಳ ಪ್ರವೇಶವಾಗಿವೆ. ಈ ವಿದ್ಯಾರ್ಥಿಗಳ ನಿರ್ವಹಣೆಗಾಗಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮ ಲೆಕ್ಕಶೀರ್ಷಿಕೆ 2225–00–103–0–26 ಯೋಜನೆಯಲ್ಲಿ ರೂ.440.03 ಲಕ್ಷಗಳು ಯೋಜನೇತರದಲ್ಲಿ ರೂ.644.61 ಲಕ್ಷ ಆಯವ್ಯಯ ನಿಗದಿ ಆಗಿದ್ದು, ಯೋಜನೆ ಬಾಬ್ತಿನಲ್ಲಿ ಪೂರ್ಣ ಅನುದಾನ ಖರ್ಚಾಗಿರುತ್ತದೆ. ಯೋಜನೇತರ ಅನುದಾನದಲ್ಲಿ ಸುಮಾರು ರೂ.12.00 ರಿಂದ 13.00 ಲಕ್ಷಗಳವರೆಗೆ ಅನುದಾನ ಉಳಿತಾಯವಾಗಲಿದೆ. ಈ ಅನುದಾನ | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾಸನ ಇವರು ಕೋರಿರುವಂತೆ ವಿದ್ಯಾರ್ಥಿಗಳ ನಿರ್ವಹಣೆ ಗಾಗಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮ ಲೆಕ್ಕಶೀರ್ಷಿಕೆ 2225–00–103–0–26 (ಯೋಜನೇತರ) ದಡಿಯಲ್ಲಿ ಉಳಿತಾಯ ವಾಗುವ ರೂ.12.00ಲಕ್ಷ (ರೂಪಾಯಿ |

| | | | |
|---|---|---|---|
| | | **ಸಮಾಜ ಕಲ್ಯಾಣ ಇಲಾಖೆ:**<br>ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಮಾತನಾಡುತ್ತಾ, 2011-12ನೇ ಸಾಲಿನ ಕಟ್ಟಡಗಳು ಯೋಜನೆಯಡಿ ಇಲಾಖಾ ಕಟ್ಟಡಗಳ ದುರಸ್ಥಿಗೆ ರೂ.25.00ಲಕ್ಷಗಳ ಅನುದಾನ ನಿಗದಿಯಾಗಿದ್ದು, ಸದರಿ ಅನುದಾನದಲ್ಲಿ ರೂ.23.50ಲಕ್ಷಗಳನ್ನು ವಿನಿಯೋಗಿಸಿದ್ದು, ರೂ.1.50ಲಕ್ಷಗಳ ಬಿಲ್ಲನ್ನು ಖಜಾನೆಗೆ ಸಲ್ಲಿಸಲಾಗಿದೆ. ಮಾರ್ಚ್ 2012ರ ಅಂತ್ಯಕ್ಕೆ ಪೂರ್ಣ ಅನುದಾನವನ್ನು ವಿನಿಯೋಗಿಸಿ ದುರಸ್ಥಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಎಂದು ಸಭೆಗೆ ವಿವರ ನೀಡಿದರು.<br>ಮುಂದುವರೆದು, ಸಮಾಜ ಕಲ್ಯಾಣ ಇಲಾಖಾ ವತಿಯಿಂದ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ವಿವಿಧ ರೀತಿಯ ಅನುಪಯುಕ್ತ ವಸ್ತುಗಳಿದ್ದು, ಸದರಿ ವಸ್ತುಗಳನ್ನು ಹರಾಜು ಮಾಡಿ ಸರ್ಕಾರಕ್ಕೆ ಹಣ ಜಮಾ ಮಾಡಬೇಕಾಗಿರುತ್ತದೆ. ಜಿಲ್ಲಾ ಮಟ್ಟದಲ್ಲಿ ಅಥವಾ ತಾಲ್ಲೂಕು ಮಟ್ಟದಲ್ಲಿ ಎಲ್ಲಾ ವಿದ್ಯಾರ್ಥಿನಿಲಯಗಳಿಂದ ಅನುಪಯುಕ್ತ ವಸ್ತುಗಳನ್ನು ಸಂಗ್ರಹಿಸಿ ಹರಾಜು ಮಾಡಲು ಸಾಗಾಣಿಕಾ ವೆಚ್ಚವೇ ಹರಾಜಿನಿಂದ ಬರುವ ಹಣಕ್ಕಿಂತ ಹೆಚ್ಚಾಗುತ್ತದೆ. ಆದ್ದರಿಂದ, ಪ್ರತಿ ವಿದ್ಯಾರ್ಥಿನಿಲಯವನ್ನೇ ಒಂದು ಘಟಕವನ್ನಾಗಿ ಪರಿಗಣಿಸಿ ಅನುಪಯುಕ್ತ ವಸ್ತುಗಳನ್ನು ಹರಾಜು ಮಾಡುವುದು ಸೂಕ್ತವಾಗಿರುತ್ತದೆ. ಆದ್ದರಿಂದ, ಆಯಾ ವಿದ್ಯಾರ್ಥಿನಿಲಯದಲ್ಲಿಯೇ ಅನುಪಯುಕ್ತ ವಸ್ತುಗಳನ್ನು ಹರಾಜು ಮಾಡಲು ಮತ್ತು ಅದರಿಂದ, ಬರುವ ಹಣವನ್ನು ಸರ್ಕಾರಕ್ಕೆ ಜಮಾ ಮಾಡಲು ಸಭೆಯು ಅನುಮತಿ ನೀಡಬೇಕೆಂದು ಕೋರಿದರು.<br>ಉಪ ಕಾರ್ಯದರ್ಶಿ (ಆಡಳಿತ)ರವರು ಮಾತನಾಡುತ್ತಾ,ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳಿಗೆ ಜಿಲ್ಲಾ ಪಂಚಾಯಿತಿ ಸದಸ್ಯರನ್ನು ಸಂಪರ್ಕಿಸಿ ಸ್ಥಳೀಯ ಸಮಸ್ಯೆಗಳ ಬಗ್ಗೆ ಅವರೊಂದಿಗೆ ಚರ್ಚಿಸಿ ಅಗತ್ಯ ಕ್ರಮ ವಹಿಸುವಂತೆ ನಿರ್ದೇಶನವನ್ನು ನೀಡುವಂತೆ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರಿಗೆ ತಿಳಿಸಿದರು.<br>ತಾಲ್ಲೂಕು ಪಂಚಾಯಿತಿ ಕಟ್ಟಡಗಳ ದುರಸ್ತಿ ಯೋಜನೆಯಡಿ ಕಾಮಗಾರಿಗಳನ್ನು ಕಳಪೆ ಗುಣಮಟ್ಟದಲ್ಲಿ `ಅನುಷ್ಠಾನ ಮಾಡಿರುತ್ತಾರೆ. ಈ ಬಗ್ಗೆ ಪರಿಶೀಲಿಸಿ ವರದಿ ನೀಡುವಂತೆ ಮಾನ್ಯ ಸಮಿತಿ ಅಧ್ಯಕ್ಷರು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಮತ್ತು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಎಸ್.ಎಲ್.ನಾಗಮಣಿರವರು ಮಾತನಾಡುತ್ತಾ, ಮಲ್ಲಿಪಟ್ಟಣದಲ್ಲಿರುವ ವಿದ್ಯಾರ್ಥಿನಿಲಯಕ್ಕೆ ಶೌಚಾಲಯ ಇಲ್ಲದೇ ಇರುವುದರಿಂದ, ವಿದ್ಯಾರ್ಥಿಗಳಿಗೆ ಬಹಳ ತೊಂದರೆಯಾಗಿದ್ದು, ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಉತ್ತರಿಸುತ್ತಾ, ಪ್ರಸಕ್ತ ಸಾಲಿನಲ್ಲಿ ರಾಜ್ಯ ವಲಯದಡಿ ವಿದ್ಯಾರ್ಥಿನಿಲಯಗಳ ಮೂಲ ಸೌಕರ್ಯಕ್ಕಾಗಿ ಅನುದಾನ ಬಿಡುಗಡೆ ಮಾಡಿದ್ದು, ಶೌಚಾಲಯ ನಿರ್ಮಿಸಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.<br>ಅಸ್ಪೃಶ್ಯತಾ ನಿವಾರಣೆ ಯೋಜನೆಯಡಿಯಲ್ಲಿ ಅಂತರ್ ಜಾತಿಯ ವಿವಾಹವಾದ ಫಲಾನುಭವಿಗಳಿಗೆ ಜಿಲ್ಲಾ ಪಂಚಾಯಿತಿ ಸದಸ್ಯರುಗಳ ಸಮ್ಮುಖದಲ್ಲಿ ಚೆಕ್ ವಿತರಣೆ ಮಾಡಲು ಕ್ರಮ ವಹಿಸುವಂತೆ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರಿಗೆ ಉಪ ಕಾರ್ಯದರ್ಶಿ (ಆಡಳಿತ)ರವರು ತಿಳಿಸಿದರು. ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಅನುದಾನ ವ್ಯಪಗತ ವಾಗದ ರೀತಿಯಲ್ಲಿ ಪರಿಶೀಲಿಸಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಕ್ರಮ ವಹಿಸಬೇಕೆಂದು ತಿಳಿಸಿದರು. | ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಪ್ರಸ್ತಾಪಿಸಿ ವಿಷಯದ ಬಗ್ಗೆ ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಿ ಕೆಳಕಂಡಂತೆ ನಿರ್ಣಯಿಸಲಾಯಿತು.<br>ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆಯ ವತಿಯಿಂದ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಉಪಯೋಗಕ್ಕೆ ಬಾರದೇ ಇರುವ ಅನುಪಯುಕ್ತ ವಸ್ತುಗಳನ್ನು ಪ್ರತಿ ವಿದ್ಯಾರ್ಥಿ ನಿಲಯ ವನ್ನು ಘಟಕವನ್ನಾಗಿ ಪರಿಗಣಿಸಿ ಆಯಾ ವಿದ್ಯಾರ್ಥಿನಿಲಯದಲ್ಲೇ ಅನುಪಯುಕ್ತ ವಸ್ತುಗಳನ್ನು ಹರಾಜುಮಾಡಿ ಅದರಿಂದ, ಬರುವ ಹಣವನ್ನು ಸರ್ಕಾರಕ್ಕೆ ಜಮಾ ಮಾಡಲು ನಿರ್ಣಯಿಸಲಾಯಿತು. |

**ದಿನಾಂಕ: 19-03-2012ರಂದು ಮಧ್ಯಾಹ್ನ 12-00 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳು**

ಅಧ್ಯಕ್ಷತೆ: ಶ್ರೀ ಎಂ.ಕೆ.ದೇವಪ್ಪ ಮಲ್ಲಿಗೆವಾಳು

ಅಧ್ಯಕ್ಷರು

ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ

ಹಾಜರಿ :05

ಗೈರು ಹಾಜರಿ:02

| ಕ್ರ ಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಉಪ ಕಾರ್ಯದರ್ಶಿ(ಆಡಳಿತ) ರವರು ಸಭೆಗೆ ಹಾಜರಿದ್ದ ಮಾನ್ಯ ಸಮಿತಿ ಅಧ್ಯಕ್ಷರು, ಸದಸ್ಯರು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡಬೇಕೆಂದು ಅಧ್ಯಕ್ಷರನ್ನು ಕೋರಿದರು. | |
| 1 | ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಅನುಷ್ಠಾನ ಮಾಡುವ ವಿವಿಧ ಯೋಜನೆಗಳಡಿಯಲ್ಲಿ ಸಾಧಿಸಿರುವ ಪ್ರಗತಿಯ ಬಗ್ಗೆ. | <u>**ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ:**</u><br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆರವರು ಮಾತನಾಡುತ್ತಾ, ಕಟ್ಟಡಗಳು ಯೋಜನೆಯಡಿ ರೂ.25.00ಲಕ್ಷಗಳು ದುರಸ್ಥಿಗಾಗಿ ನಿಗದಿಯಾಗಿರುತ್ತವೆ. ದುರಸ್ಥಿ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ವತಿಯಿಂದ ಅನುಷ್ಠಾನ ಮಾಡಲಾಗುತ್ತಿದ್ದು, ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ 2 ಕಾಮಗಾರಿಗಳನ್ನು ಪ್ರಾರಂಭ ಮಾಡಿರುವುದಿಲ್ಲ. ಸಕಲೇಶಪುರ ಉಪ ವಿಭಾಗದಲ್ಲಿ ವಣಗೂರು ವಿದ್ಯಾರ್ಥಿನಿಲಯದ ದುರಸ್ಥಿ ಕಾಮಗಾರಿಗಾಗಿ ಸಾಮಗ್ರಿಗಳನ್ನು ತಂದಿರುವುದನ್ನು ಭೇಟಿಯ ಸಮಯದಲ್ಲಿ ಗಮನಿಸಲಾಗಿದೆ. ಹಾಸನ ಉಪ ವಿಭಾಗದಲ್ಲಿ ಮೆಳಗೋಡು ವಿದ್ಯಾರ್ಥಿನಿಲಯದ ಕಾಮಗಾರಿಯನ್ನು ಪ್ರಾರಂಭ ಮಾಡಿರುವುದಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಹಿಂದುಳಿದ ವರ್ಗಗಳ ಇಲಾಖೆಯ ಕಟ್ಟಡಗಳ ದುರಸ್ಥಿಗೆ ನಿಗದಿಪಡಿಸಿರುವ ಅನುದಾನವನ್ನು ವ್ಯಪಗತ ಮಾಡದಂತೆ, ಕಾಮಗಾರಿಗಳನ್ನು ತ್ವರಿತವಾಗಿ ಅನುಷ್ಠಾನಗೊಳಿಸಲು ಕ್ರಮ ವಹಿಸುವಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಿದರು. | ಸಭೆಯಲ್ಲಿ ಚರ್ಚಿಸಿದಂತೆ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ **ಇಲಾಖೆಯ ಕಟ್ಟಡಗಳು ಯೋಜನೆಯಡಿ** ಯಲ್ಲಿ ದುರಸ್ಥಿಪಡಿಸುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ, ಅನುದಾನವನ್ನು ವ್ಯಪಗತ ಮಾಡದ ರೀತಿಯಲ್ಲಿ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ವಹಿಸುವಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

6. ಶ್ರೀಮತಿ ವಸಂತ, ಸದಸ್ಯರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
7. ಶ್ರೀ ಎ.ಬಿ.ನಂಜುಂಡೇಗೌಡ, ಸದಸ್ಯರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
8. ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಆಪ್ತಶಾಖೆಗೆ ಮಾಹಿತಿಗಾಗಿ
9. ಜಿಲ್ಲಾ ಪಂಚಾಯಿತಿ ಎಲ್ಲಾ ಮಾನ್ಯ ಸದಸ್ಯರುಗಳಿಗೆ ಮಾಹಿತಿಗಾಗಿ
10. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಆಪ್ತಶಾಖೆಗೆ
11. ಉಪ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯಿತಿ, ಹಾಸನ.
12. ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯಿತಿ, ಹಾಸನ.
13. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
14. ಮುಖ್ಯ ಯೋಜನಾಧಿಕರಿ, ಜಿಲ್ಲಾ ಪಂಚಾಯಿತಿ, ಹಾಸನ.
15. ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ಇಲಾಖೆ, ಹಾಸನ.
16. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ಹಾಸನ.
17. ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಬಿವೃದ್ಧಿ ಇಲಾಖೆ, ಹಾಸನ.
18. ಜಿಲ್ಲಾ ವ್ಯವಸ್ಥಾಪಕರು, ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಮತ್ತು ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಹಾಸನ.
19. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
20. ಜಿಲ್ಲೆಯ ಎಲ್ಲಾ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಹಾಸನ ಮತ್ತು ಚನ್ನರಾಯಪಟ್ಟಣ
21. ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ
22. ಉಪನಿರ್ದೇಶಕರು, ಮೂಲ ಸೌಕರ್ಯಗಳ ಇಲಾಖೆ, ಹಾಸನ.
23. ಕಚೇರಿ ಪ್ರತಿ.

1

# ಜಿಲ್ಲಾ ಪಂಚಾಯಿತಿ, ಹಾಸನ

ಸಂಖ್ಯೆ: ಜಿ.ಪಂ.ಹಾ/ಪ.ಶಾ/91/2011-12

ದಿನಾಂಕ: 09-03-2012

## ಸಭಾಹ್ವಾನ ಪತ್ರ

ಶ್ರೀ ಎಂ.ಕೆ. ದೇವಪ್ಪ ಮಲ್ಲಿಗೆವಾಳು, ಅಧ್ಯಕ್ಷರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ, ಇವರ ಅಧ್ಯಕ್ಷತೆಯಲ್ಲಿ **ದಿನಾಂಕ: 19-03-2012ರಂದು ಸೋಮವಾರ ಬೆಳಿಗ್ಗೆ 11-00 ಗಂಟೆಗೆ** ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯನ್ನು ಕರೆಯಲಾಗಿದೆ. ಸದರಿ ಸಭೆಗೆ ಸಮಿತಿ ಸದಸ್ಯರುಗಳು **ಸಕಾಲಕ್ಕೆ** ಹಾಜರಾಗಬೇಕೆಂದು ಕೋರಿದೆ.

ಉಪ ಕಾರ್ಯದರ್ಶಿ(ಆಡಳಿತ),
ಹಾಗೂ ಸದಸ್ಯ ಕಾರ್ಯದರ್ಶಿ,
ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ,
ಜಿಲ್ಲಾ ಪಂಚಾಯಿತಿ, ಹಾಸನ.

### ಅಧ್ಯಕ್ಷರ ಅಪ್ಪಣೆ ಮೇರೆಗೆ ವಿಷಯಗಳು

ಪ್ರತಿಯನ್ನು:

1. ಶ್ರೀ ಎಂ.ಕೆ.ದೇವಪ್ಪ ಮಲ್ಲಿಗೆವಾಳು, ಅಧ್ಯಕ್ಷರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
2. ಶ್ರೀಮತಿ ಜ್ಯೋತಿ ಗುರುದೇವ, ಸದಸ್ಯರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
3. ಶ್ರೀಮತಿ ಎಸ್.ಎಲ್.ನಾಗಮಣಿ, ಸದಸ್ಯರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
4. ಶ್ರೀಮತಿ ಪಾರ್ವತಮ್ಮ, ಸದಸ್ಯರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
5. ಶ್ರೀಮತಿ ಮಂಜುಳಬೈರಾಜು, ಸದಸ್ಯರು, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ